ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯತ್ ನೌಕರರಿಗೆ ವೇತನ ಪಾವತಿ ಮಾಡುವ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು):-

909 (965) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕುದೂರು ಹೋಬಳಿ, ಬಿಸ್ಕೂರು ಗ್ರಾಮ ಪಂಚಾಯತ್ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿ ರುವ 19 ಜನ ವಾಟರ್ಮೆನ್, 01 ಬಿಲ್ ಕಲೆಕ್ಟರ್ ಹಾಗೂ 02 ಮಂದಿ ಬೆರಳಚ್ಚುಗಾರರಿಗೆ ಕಳೆದ 08 ತಿಂಗಳಿಂದ ವೇತನ ಪಾವತಿಯಾಗದೇ ಸದರಿ ನೌಕರರು ಕಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವೇತನ ಪಾವತಿಯಾಗದಿರಲು ಕಾರಣಗಳೇನು;

(ಆ) ಸದರಿ ಜಿಲ್ಲೆಯ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಸಮಯಕ್ಕೆ ಸರಿಯಾಗಿ ವೇತನ ಪಾವತಿಯಾಗಿರುವುದಿಲ್ಲ ; ಸದರಿ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಇ) ಸದರಿ ನೌಕರರಿಗೆ ಯಾವಾಗ ವೇತನ ಸಂದಾಯವಾಗುವುದು?